ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1595

ಸದಸ್ಯರ ಹೆಸರು : ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 20.03.2020

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದ ಗ್ರಾಮ ಪಂಚಾಯತಿಗಳ ಗ್ರಾಮ ಸಭೆಗಳಲ್ಲಿ ತುರ್ತು ಸಂದರ್ಭಗಳಲ್ಲಿ ಮೂಲಸೌಕರ್ಯದಂತಹ (ರಸ್ತೆ, ಚರಂಡಿ, ಕುಡಿಯುವ ನೀರು ಪೂರೈಕೆಗಾಗಿ ಕೊಳವೆ ಬಾವಿ ಕೊರೆಯುವುದು ಇತ್ಯಾದಿ) ಕಾಮಗಾರಿ ಕೈಗೊಳ್ಳಲು ಅನುದಾನ ಕೊರತೆಯಿಂದಾಗಿ ಗ್ರಾಮ ಸಭೆಯಲ್ಲಿ ಯಾವುದೇ ನಿರ್ಣಯ ಕೈಗೊಳ್ಳಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರವು ಕೈಗೊಂಡ ಕ್ರಮಗಳೇನು;	ಬಂದಿಲ್ಲ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3–ಇ (7) ರಲ್ಲಿ ಗ್ರಾಮ ಸಭೆಗಳ ಸಭೆಗಳಲ್ಲಿ ತೆಗೆದುಕೊಂಡ ನಿರ್ಣಯಗಳನ್ನು, ಅಭಿಪ್ರಾಯಗಳನ್ನು, ಶಿಫಾರಸ್ಸುಗಳನ್ನು ಅಥವಾ ಸಲಹೆಗಳನ್ನು ಗ್ರಾಮ ಸಭೆ ಗೊತ್ತುಪಡಿಸಿದ ಆದ್ಯತೆಗಳನ್ನು ಬದಲಿಸದೆಯೇ, ಲಭ್ಯವಿರುವ ನಿಧಿಗಳಿಗೆ ಒಳಪಟ್ಟು ಕಾಮಗಾರಿಗಳನ್ನು ಗ್ರಾಮ ಪಂಚಾಯತಿಗಳು ಕೈಗೊಳ್ಳಬಹುದಾಗಿದೆ.
(ಆ)	ಪ್ರತಿ ಗ್ರಾಮ ಪಂಚಾಯತಿಗೆ ತುರ್ತು ಸಂದರ್ಭಗಳಲ್ಲಿ ಮೂಲ ಸೌಕರ್ಯದಂತಹ ಕಾಮಗಾರಿಗಳಿಗಾಗಿ ವಿಶೇಷ ಅನುದಾನ ನಿಗಧಿಪಡಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?	14ನೇ ಹಣಕಾಸು ಆಯೋಗದ ಅನುದಾನ, ಕುಡಿಯುವ ನೀರು ಸರಬರಾಜು ಯೋಜನೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರವು ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಇದಲ್ಲದೆ ಗ್ರಾಮ ಪಂಚಾಯತಿಗಳು ಸ್ವಂತ ಸಂಪನ್ಮೂಲದಲ್ಲಿ ತುರ್ತು ಸಂದರ್ಭಗಳಲ್ಲಿ ಮೂಲ ಸೌಕರ್ಯದಂತಹ ಕಾಮಗಾರಿಗಳನ್ನು ಕೈಗೊಳ್ಳಬಹುದಾಗಿದೆ.

ಸಂ. ಗ್ರಾಅಪ 313 ಗ್ರಾಪಂಅ 2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು